**All India Radio: Bangalore**
**National Bulletin In Kannada**
**23.03.2026 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**23.03.2026 19.35 hrs**
***************

ಮುಖ್ಯಾಂಶಗಳು

೧. ಪಶ್ಚಿಮ ಏಷ್ಯಾ ಸಂಘರ್ಷ ಹಿನ್ನೆಲೆ, ಈವರೆಗೆ ೩.೭೫ಲಕ್ಷಕ್ಕೂ ಅಧಿಕ ಭಾರತೀಯರ ರಕ್ಷಣೆ: ಪ್ರಧಾನಿ ನರೇಂದ್ರ ಮೋದಿ.

೨. ದೇಶದಲ್ಲಿ ಕ್ಷಯರೋಗ ಕೊನೆಗೊಳಿಸಲು ಸಾಮೂಹಿಕ ಸಂಕಲ್ಪದೊಂದಿಗೆ ಒಟ್ಟಾಗಿ ಕೆಲಸ ಮಾಡುವಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ

೩. ಇರಾನ್‌ನ ವಿದ್ಯುತ್ ಸ್ಥಾವರಗಳ ಮೇಲಿನ ದಾಳಿಯನ್ನು ಐದು ದಿನಗಳವರೆಗೆ ತಡೆಹಿಡಿಯುವಂತೆ ಅಮೆರಿಕ ಅಧ್ಯಕ್ಷ ಘೋಷಣೆ.

೪. ೨೪ನೇ ರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್; ಮಹಿಳೆಯರ ಜಾವೆಲಿನ್ ಥ್ರೋ ಎಫ್೧೨ ವಿಭಾಗದಲ್ಲಿ ಕಿಪಾ ಮೆರೊಗೆ ಚಿನ್ನದ ಪದಕ.

***************

ಪಶ್ಚಿಮ ಏಷ್ಯಾದಲ್ಲಿ ಉಂಟಾಗಿರುವ ಸಂಘರ್ಷದ ಹಿನ್ನೆಲೆಯಲ್ಲಿ ಈವರೆಗೆ ೩.೭೫ಲಕ್ಷಕ್ಕೂ ಅಧಿಕ ಭಾರತೀಯರನ್ನು ಸುರಕ್ಷಿತವಾಗಿ ತಾಯ್ನಾಡಿಗೆ ಕರೆ ತರಲಾಗಿದೆ. ಇರಾನ್ ಒಂದರಿಂದಲೇ ಒಂದು ಸಾವಿರ ಮಂದಿ ಭಾರತೀಯರು ಸ್ವದೇಶಕ್ಕೆ ವಾಪಸ್ ಆಗಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಲೋಕಸಭೆಯಲ್ಲಿಂದು ಹೇಳಿದ್ದಾರೆ.

ಸಂಘರ್ಷದ ಕುರಿತು ಲೋಕಸಭೆಗೆ ವಿವರ ನೀಡಿದ ಅವರು, ಅದೇ ರೀತಿ ಕೊಲ್ಲಿ ದೇಶಗಳಲ್ಲಿ ಒಂದು ಕೋಟಿಗೂ ಹೆಚ್ಚು ಭಾರತೀಯರು ನೆಲೆಸಿದ್ದು, ಅವರ ಸುರಕ್ಷತೆಗಾಗಿ ನಿಯಂತ್ರಣ ಕೊಠಡಿ, ಸಹಾಯವಾಣಿಗಳ ಮೂಲಕ ಸೇವೆ ಕಲ್ಪಿಸಲಾಗುತ್ತಿದೆ. ಈ ಬಿಕ್ಕಟ್ಟಿನ ಪರಿಸ್ಥಿತಿಯಲ್ಲಿ ವಿದೇಶಗಳಲ್ಲಿರುವ ಭಾರತೀಯರ ಭದ್ರತೆಗೆ ಹೆಚ್ಚಿನ ಪ್ರಾಧಾನ್ಯತೆ ನೀಡಲಾಗಿದೆ ಎಂದರು.

ಗೃಹಬಳಕೆ ಎಲ್‌ಪಿಜಿ ಸಿಲಿಂಡರ್ ಪೂರೈಕೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ದೇಶೀಯವಾಗಿ ಅಡುಗೆ ಅನಿಲ ಉತ್ಪಾದನೆಯನ್ನು ಹೆಚ್ಚಿಸಲಾಗಿದೆ. ಹಾರ್ಮುಜ್ ಜಲಸಂಧಿಯಲ್ಲಿ ಸಿಲುಕಿದ್ದ ಭಾರತೀಯ ನೌಕೆಗಳನ್ನು ಸುರಕ್ಷಿತವಾಗಿ ಕರೆತರಲಾಗಿದ್ದು, ೪೧ ದೇಶಗಳಿಂದ ಕಚ್ಚಾ ತೈಲ, ಅನಿಲ, ರಸಗೊಬ್ಬರಗಳನ್ನು ಆಮದು ಮಾಡಿಕೊಳ್ಳಲಾಗುತ್ತಿದೆ ಎಂದು ವಿವರಿಸಿದರು.

ಭಾರತದಲ್ಲಿ ೫೩ ಲಕ್ಷ ಮೆಟ್ರಿಕ್ ಟನ್ ಇಂಧನ ಮೀಸಲು ಇದೆ. ಪಶ್ಚಿಮ ಏಷ್ಯಾದಲ್ಲಿ ಪರಿಸ್ಥಿತಿ ದಾರುಣವಾಗಿದ್ದು, ಹಾರ್ಮುಜ್ ಜಲಸಂಧಿಯ ಮೂಲಕ ಅನಿಲ, ಕಚ್ಚಾ ತೈಲ ಸಾಗಾಣಿಕೆಗೆ ತೀವ್ರ ಸಮಸ್ಯೆ ಉಂಟಾಗಿದೆ. ಆದರೆ ಇಂಧನ ಸಮಸ್ಯೆಗಳನ್ನು ಪರಿಹರಿಸಲು ತಮ್ಮ ಸರ್ಕಾರ ಸರ್ವ ಪ್ರಯತ್ನ ನಡೆಸುತ್ತಿದೆ ಎಂದು ತಿಳಿಸಿದರು.

ಶೀಘ್ರ, ಸಂಘರ್ಷ ಅಂತ್ಯಗೊಂಡು ಶಾಂತಿ ಸ್ಥಾಪನೆಯಾಗಬೇಕು ಎನ್ನುವುದು ಭಾರತದ ನಿಲುವಾಗಿದೆ. ಶಾಂತಿಯುತ ಪರಿಹಾರಕ್ಕೆ ಎಲ್ಲರೂ ಪ್ರಯತ್ನಿಸಬೇಕು. ರಾಜತಾಂತ್ರಿಕ ಹಾಗೂ ಸಂವಾದದ ಮೂಲಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎಂದು ಹೇಳಿದರು.

ಸಂಘರ್ಷದ ಕುರಿತು ಕೊಲ್ಲಿ ರಾಷ್ಟ್ರಗಳ ನಾಯಕರೊಂದಿಗೆ ತಾವು ಖುದ್ದಾಗಿ ಮಾತನಾಡಿದ್ದು, ಕಚ್ಚಾ ತೈಲ ಹಾಗೂ ಮೂಲ ಸೌಕರ್ಯ ಯೋಜನೆಗಳ ಮೇಲೆ ನಡೆದಿರುವ ದಾಳಿಯನ್ನು ಖಂಡಿಸಲಾಗಿದೆ. ಅದೇ ರೀತಿ ಈ ಸಂಕಷ್ಟ ಪರಿಸ್ಥಿತಿಯನ್ನು ದುರುಪಯೋಗಪಡಿಸಿಕೊಳ್ಳುವ ಪ್ರಯತ್ನಗಳ ಮೇಲೆ ಕ್ರಮ ಕೈಗೊಳ್ಳಲು ಭದ್ರತಾ ಪಡೆಗಳನ್ನು ಜಾಗೃತಗೊಳಿಸಿರುವುದಾಗಿ ಪ್ರಧಾನಿ ಹೇಳಿದ್ದಾರೆ.

ಈ ಸಂಘರ್ಷದಿಂದ ಅನೇಕ ದುಷ್ಪರಿಣಾಮಗಳು ಸಂಭವಿಸುವ ಅವಕಾಶವಿದೆ ಹಾಗಾಗಿ ಇದನ್ನು ದೃಢವಾಗಿ ಎದುರಿಸಲು ಎಲ್ಲರೂ ಐಕ್ಯತೆಯಿಂದ ಇರಬೇಕೆಂದು ದೇಶದ ಜನತೆಗೆ ಕರೆ ನೀಡಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಲೋಕಸಭೆಯಲ್ಲಿ ನೀಡಿದ ಹೇಳಿಕೆ, ಪಶ್ಚಿಮ ಏಷ್ಯಾ ಬಿಕ್ಕಟ್ಟಿನಿಂದ ಉಂಟಾಗುವ ಯಾವುದೇ ಪರಿಸ್ಥಿತಿಯನ್ನು ಎದುರಿಸಲು ಭಾರತ ಸಿದ್ಧವಾಗಿದೆ ಎಂಬುದನ್ನು ಸ್ಪಷ್ಟಪಡಿಸಿದೆ ಎಂದು ಬಿಜೆಪಿ ಸಂಸದ ರಾಜೀವ್ ಪ್ರತಾಪ್ ರೂಡಿ ಪ್ರತಿಕ್ರಿಯಿಸಿದ್ದಾರೆ.

ಹಾರ್ಮುಜ್ ಜಲಸಂಧಿಯಲ್ಲಿ ಭಾರತ ಯಾವುದೇ ಅಡೆತಡೆಯನ್ನು ಸಹಿಸುವುದಿಲ್ಲ ಎಂದು ಪ್ರಧಾನಿ ಮೋದಿ ಸ್ಪಷ್ಟಪಡಿಸಿದ್ದಾರೆ ಎಂದು  ಅವರು ಹೇಳಿದರು.

ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಬಗ್ಗೆ ಪ್ರಧಾನಿ ಮೋದಿ ಇಂದು ಲೋಕಸಭೆಯಲ್ಲಿ ಇಡೀ ರಾಷ್ಟ್ರಕ್ಕೆ ಬಹಳ ವಿವರವಾದ ಮತ್ತು ಸ್ಫೂರ್ತಿದಾಯಕ ಉತ್ತರವನ್ನು ನೀಡಿದ್ದಾರೆ ಎಂದು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಹೇಳಿದರು.

ಸಂಸತ್ತಿನ ಆವರಣದಲ್ಲಿ ಮಾತನಾಡಿದ ಅವರು, ಭಾರತದ ಇಂಧನ ಭದ್ರತೆಯನ್ನು ಪರಿಗಣಿಸಲಾಗುತ್ತಿದೆ ಎಂದು ಪ್ರಧಾನಿ ಮೋದಿ ದೇಶದ ಸಾಮಾನ್ಯ ಜನರಿಗೆ ಭರವಸೆ ನೀಡಿದ್ದಾರೆ ಎಂದು ಅವರು ಪ್ರತಿಕ್ರಯಿಸಿದರು.

***************

ಪಶ್ಚಿಮ ಏಷ್ಯಾ ಸಂಘರ್ಷದ ಕುರಿತು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಜರ್ಮನ್ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದ್ದಾರೆ.

ಉಭಯ ಪಕ್ಷದವರು ಸಂಪರ್ಕದಲ್ಲಿರಲು ಒಪ್ಪಿಕೊಂಡಿರುವುದಾಗಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್ ತಿಳಿಸಿದ್ದಾರೆ.

***************

ನಾಳೆ ವಿಶ್ವ ಕ್ಷಯರೋಗ ದಿನವನ್ನು ಆಚರಿಸಲಾಗುವುದು. ಕ್ಷಯರೋಗದಿಂದ ಉಂಟಾಗುವ ಜಾಗತಿಕ ಸವಾಲಿನ ಬಗ್ಗೆ ಜಾಗೃತಿ ಮೂಡಿಸುವುದು ಈ ದಿನದ ಉದ್ದೇಶವಾಗಿದೆ.

ಈ ಸಂದರ್ಭದಲ್ಲಿ ದೇಶದಲ್ಲಿ ಕ್ಷಯರೋಗವನ್ನು ಶಾಶ್ವತವಾಗಿ ಕೊನೆಗೊಳಿಸಲು ಸಾಮೂಹಿಕ ಸಂಕಲ್ಪದೊಂದಿಗೆ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕೆಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಗರಿಕರಿಗೆ ತಮ್ಮ ಸಂದೇಶದಲ್ಲಿ ಒತ್ತಾಯಿಸಿದರು.

***************

ಉತ್ತರ ಪ್ರದೇಶದ ಗ್ರೇಟರ್ ನೋಯ್ಡಾದಲ್ಲಿರುವ ಗೌತಮ್ ಬುದ್ಧ ವಿಶ್ವವಿದ್ಯಾಲಯದಲ್ಲಿ ನಾಳೆ ನಡೆಯಲಿರುವ ೨೦೨೬ರ ವಿಶ್ವ ಕ್ಷಯ ದಿನದ ರಾಷ್ಟ್ರೀಯ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ವಹಿಸಲಿದ್ದಾರೆ.

ಈ ಸಂದರ್ಭದಲ್ಲಿ, ನಡ್ಡಾ ಅವರು ಕೇಂದ್ರೀಕೃತ ಮತ್ತು ತೀವ್ರವಾದ ನೂರು ದಿನಗಳ ಟಿಬಿ ಮುಕ್ತ ಭಾರತ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಅವರು ಟಿಬಿ ಮುಕ್ತ ಭಾರತ ಆಪ್ ಮತ್ತು ಟಿಬಿ ಮುಕ್ತ ಅರ್ಬನ್ ವಾರ್ಡ್ ಉಪಕ್ರಮವನ್ನು ಸಹ ಪ್ರಾರಂಭಿಸಲಿದ್ದಾರೆ.

ಈ ಉಪಕ್ರಮಗಳು ಕ್ಷಯ ಪ್ರಕರಣಗಳ ಪತ್ತೆಯನ್ನು ವೇಗಗೊಳಿಸುವುದು, ಚಿಕಿತ್ಸೆಯ ಅನುಸರಣೆಯನ್ನು ಸುಧಾರಿಸುವುದು ಮತ್ತು ಟಿಬಿ ಸೇವೆಗಳ ಕೊನೆಯ ಹಂತದ ವಿತರಣೆಯನ್ನು ಬಲಪಡಿಸುವ ಗುರಿಯನ್ನು ಹೊಂದಿವೆ. 'ಹೌದು! ನಾವು ಟಿಬಿಯನ್ನು ಕೊನೆಗೊಳಿಸಬಹುದು!' ಎಂಬ ಧ್ಯೇಯ ವಾಕ್ಯದೊಂದಿಗೆ ೨೦೨೬ರ ವಿಶ್ವ ಕ್ಷಯ ದಿನವನ್ನು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಆಚರಿಸುತ್ತದೆ.

***************

ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯಲು ಇರಾನ್‌ಗೆ ನೀಡಿದ್ದ ಗಡುವನ್ನು ಐದು ದಿನಗಳ ಕಾಲ ವಿಸ್ತರಿಸಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ ಮಾಡಿದ್ದಾರೆ. ಇರಾನ್‌ನ ವಿದ್ಯುತ್ ಸ್ಥಾವರಗಳ ಮೇಲಿನ ದಾಳಿಯನ್ನು ಅಮೆರಿಕ ಐದು ದಿನಗಳವರೆಗೆ ತಡೆಹಿಡಿಯಲಿದೆ ಎಂದು ಅವರು ಹೇಳಿದ್ದಾರೆ.

ಹಿಂದೆ ನೀಡಿದ್ದ ಗಡುವಿನ ಮುಕ್ತಾಯಕ್ಕೆ ಕೆಲವೇ ಗಂಟೆಗಳ ಮೊದಲು, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅಮೇರಿಕಾ ಅಧ್ಯಕ್ಷ ಟ್ರಂಪ್ ಈ ಘೋಷಣೆ ಮಾಡಿದ್ದಾರೆ. ಅಮೆರಿಕ ಮತ್ತು ಇರಾನಿನ ಅಧಿಕಾರಿಗಳ ನಡುವಿನ ಇತ್ತೀಚಿನ ಚರ್ಚೆಗಳು ಬಹಳ ಉತ್ತಮ ಮತ್ತು ಉತ್ಪಾದಕವಾಗಿವೆ. ಇವು ಸಂಘರ್ಷದ ಸಂಪೂರ್ಣ ಪರಿಹಾರಕ್ಕೆ ಕಾರಣವಾಗಬಹುದು ಎಂಬ ಆಶಾವಾದವನ್ನು ಅವರು ವ್ಯಕ್ತಪಡಿಸಿದರು.

ಈ ಬೆಳವಣಿಗೆಯ ಹಿನ್ನೆಲೆಯಲ್ಲಿ, ಇರಾನಿನ ಮಾಧ್ಯಮವು, ಟೆಹ್ರಾನ್, ವಾಷಿಂಗ್ಟನ್‌ನೊಂದಿಗಿನ ಮಾತುಕತೆಯ ನಿರೀಕ್ಷೆಯನ್ನು ದೃಢವಾಗಿ ತಿರಸ್ಕರಿಸಿದೆ. ಪ್ರಸ್ತುತ ಉಭಯ ಪಕ್ಷದವರ ನಡುವೆ ಯಾವುದೇ ನೇರ ಸಂಪರ್ಕ ಏರ್ಪಟ್ಟಿಲ್ಲ ಎಂದು ವರದಿ ಮಾಡಿದೆ. ಇರಾನ್‌ನ ವಿದೇಶಾಂಗ ಸಚಿವಾಲಯವು ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ಇತ್ತೀಚಿನ ಹೇಳಿಕೆಗಳನ್ನು ತಳ್ಳಿಹಾಕಿದೆ. ಜಾಗತಿಕ ಇಂಧನ ಮಾರುಕಟ್ಟೆಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಮತ್ತು ಸಂಭಾವ್ಯ ಮಿಲಿಟರಿ ಯೋಜನೆಗಾಗಿ ಸಮಯವನ್ನು ಬಳಸಿಕೊಳ್ಳಲು ಅಮೆರಿಕಾ ಉದ್ದೇಶಿಸಿದೆ ಎಂದು ಅರೆ-ಅಧಿಕೃತ ಸುದ್ದಿ ಸಂಸ್ಥೆ ಮೆಹರ್ ನಡೆಸಿದ ತಿಳಿಸಿದೆ.

***************

ಲೋಕಸಭೆಯು ೨೦೨೬ರ ಹಣಕಾಸು ಮಸೂದೆಯನ್ನು ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಂಡಿದೆ. ೨೦೨೬-೨೦೨೭ ರ ಹಣಕಾಸು ವರ್ಷಕ್ಕೆ ಕೇಂದ್ರ ಸರ್ಕಾರದ ಹಣಕಾಸು ಪ್ರಸ್ತಾವನೆಗಳನ್ನು ಜಾರಿಗೆ ತರುವ ಉದ್ದೇಶವನ್ನು ಈ ಮಸೂದೆ ಹೊಂದಿದೆ.

ರಾಜ್ಯಸಭೆಯು ಇಂದು ಧನ ವಿನಿಯೋಗ ಮಸೂದೆ ೨೦೨೬ ರ ಕುರಿತು ಚರ್ಚೆ ನಡೆಸಿತು. ಚರ್ಚೆ ನಾಳೆಯೂ ಮುಂದುವರಿಯಲಿದೆ. ನಂತರ, ನಿಗದಿತ ಕಾರ್ಯಕಲಾಪ ಪೂರ್ಣಗೊಳಿಸಿದ ನಂತರ ಮೇಲ್ಮನೆಯನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

***************

ಕಾರ್ಪೊರೇಟ್ ಕಾನೂನುಗಳ- ತಿದ್ದುಪಡಿ ಮಸೂದೆ-೨೦೨೬ ಅನ್ನು ಹೆಚ್ಚಿನ ಪರಿಶೀಲನೆಗಾಗಿ ಜಂಟಿ ಸಂಸದೀಯ ಸಮಿತಿಗೆ ಉಲ್ಲೇಖಿಸಲಾಗಿದೆ.

ಇಂದು ಲೋಕಸಭೆಯಲ್ಲಿಂದು ಮಸೂದೆಯನ್ನು ಮಂಡಿಸಿದ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್, ಮಸೂದೆಯನ್ನು ವಿವರವಾದ ವಿಶ್ಲೇಷಣೆಗಾಗಿ ಜಂಟಿ ಸಮಿತಿಗೆ ಕಳುಹಿಸಲು ಪ್ರಸ್ತಾಪಿಸಿದರು. ಪ್ರಸ್ತಾವನೆಗೆ ಸದನವು ಅನುಮೋದನೆ ನೀಡಿತು.

ಸೀಮಿತ ಹೊಣೆಗಾರಿಕೆ ಪಾಲುದಾರಿಕೆ ಕಾಯ್ದೆ ೨೦೦೮ ಮತ್ತು ಕಂಪನಿಗಳ ಕಾಯ್ದೆ ೨೦೧೩ ಅನ್ನು ತಿದ್ದುಪಡಿ ಮಾಡುವ ಗುರಿಯನ್ನು ಈ ಮಸೂದೆ ಹೊಂದಿದೆ.

ಮಸೂದೆ ಪರಿಚಯಿಸುವ ಮೊದಲು, ಕಾಂಗ್ರೆಸ್ ಸಂಸದ ಮನೀಶ್ ತಿವಾರಿ ಸೇರಿದಂತೆ ವಿರೋಧ ಪಕ್ಷದ ಸದಸ್ಯರು ಮಸೂದೆ ಮಂಡಿಸುವುದನ್ನು ವಿರೋಧಿಸಿದರು. ಪ್ರಸ್ತಾವಿತ ಶಾಸನವು ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿಯ ನಿಬಂಧನೆಗಳನ್ನು ದುರ್ಬಲಗೊಳಿಸುತ್ತದೆ ಎಂದು ಅವರು ಆರೋಪಿಸಿದರು.

ಅವರ ಕಳವಳಗಳಿಗೆ ಪ್ರತಿಕ್ರಿಯಿಸಿದ ನಿರ್ಮಲಾ ಸೀತಾರಾಮನ್, ಪ್ರಸ್ತಾವಿತ ತಿದ್ದುಪಡಿಯು, ಹೆಚ್ಚಿನ ಹೂಡಿಕೆಗಳನ್ನು ಆಕರ್ಷಿಸುವುದಲ್ಲದೆ ಕಾರ್ಪೊರೇಟ್ ಆಡಳಿತವನ್ನು ಸುಗಮಗೊಳಿಸುತ್ತದೆ ಎಂದು ಹೇಳಿದರು.

***************

ಕಳೆದ ಕೆಲವು ವರ್ಷಗಳಲ್ಲಿ, ಕಲ್ಲಿದ್ದಲು ವಲಯದಲ್ಲಿ ಸರ್ಕಾರವು ಹಲವಾರು ಸುಧಾರಣೆಗಳನ್ನು ಕೈಗೊಂಡಿದ್ದು, ಕಲ್ಲಿದ್ದಲು ನಿಕ್ಷೇಪಗಳ ಹಂಚಿಕೆ ಪ್ರಕ್ರಿಯೆಯನ್ನು ಪಾರದರ್ಶಕಗೊಳಿಸಲಾಗಿದೆ ಎಂದು ಕೇಂದ್ರ ಕಲ್ಲಿದ್ದಲು ಖಾತೆ ಸಚಿವ ಜಿ. ಕಿಶನ್ ರೆಡ್ಡಿ ಹೇಳಿದ್ದಾರೆ.

ರಾಜ್ಯಸಭೆಯ ಪ್ರಶ್ನೋತ್ತರ ವೇಳೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಭಾರತವು ವಿಶ್ವದ ಐದನೇ ಅತಿದೊಡ್ಡ ಕಲ್ಲಿದ್ದಲು ನಿಕ್ಷೇಪಗಳನ್ನು ಹೊಂದಿದೆ ಮತ್ತು ಪ್ರಸ್ತುತ ಜಾಗತಿಕವಾಗಿ ಎರಡನೇ ಕಲ್ಲಿದ್ದಲು ಉತ್ಪಾದಕ ಮತ್ತು ಬಳಕೆದಾರ ರಾಷ್ಟ್ರವಾಗಿದೆ ಎಂದು ಹೇಳಿದ್ದಾರೆ. ಮುಂದಿನ ೫೦-೬೦ ವರ್ಷಗಳಲ್ಲಿ ದೇಶದ ಇಂಧನ ಅಗತ್ಯತೆಗಳನ್ನು ಪೂರೈಸಿಕೊಳ್ಳುವ ನಿರೀಕ್ಷೆಯಿದೆ ಎಂದು ತಿಳಿಸಿದರು.

***************

ಒಡಿಶಾದ ಭುವನೇಶ್ವರದಲ್ಲಿ ನಡೆದ ೨೪ನೇ ರಾಷ್ಟ್ರೀಯ ಪ್ಯಾರಾ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್ ೨೦೨೬ ರಲ್ಲಿ ಅರುಣಾಚಲದ ಪ್ಯಾರಾ-ಅಥ್ಲೀಟ್ ಕಿಪಾ ಮೆರೊ ಮಹಿಳೆಯರ ಜಾವೆಲಿನ್ ಥ್ರೋ ಎಫ್೧೨ ವಿಭಾಗದಲ್ಲಿ ಚಿನ್ನದ ಪದಕ ಗೆದ್ದರು.

ಅವರು ತಮ್ಮ ಸಮರ್ಪಣೆ, ಸ್ಥಿತಿಸ್ಥಾಪಕತ್ವ ಮತ್ತು ಶ್ರೇಷ್ಠತೆಯನ್ನು ಪ್ರದರ್ಶಿಸಿ ತಮ್ಮದೇ ಆದ ರಾಷ್ಟ್ರೀಯ ದಾಖಲೆಯನ್ನು ಮುರಿದಿದ್ದಾರೆ. ಏತನ್ಮಧ್ಯೆ, ಮಹಿಳೆಯರ ೪೦೦ ಮೀಟರ್ ಟಿ೧೩ ವಿಭಾಗದಲ್ಲಿ ಟೆಕಿ ಮೆಟಾ ಬೆಳ್ಳಿ ಪದಕ ಗೆದ್ದರು.

***************

ಡಾ. ರಾಮ್ ಮನೋಹರ್ ಲೋಹಿಯಾ ಅವರ ಜನ್ಮ ದಿನಾಚರಣೆಯ ಅಂಗವಾಗಿ, ಇಂದು ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ ಸಂವಿಧಾನ್ ಸದನದ ಕೇಂದ್ರ ಸಭಾಂಗಣದಲ್ಲಿ ಅವರಿಗೆ ಪುಷ್ಪ ನಮನ ಸಲ್ಲಿಸಿದರು.

*******ಮುಕ್ತಾಯ*******